ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE :

# 12 ಕ್ರಷರ್‌ಗಳಿಗೆ ಬೀಗಮುದ್ರೆ

## ಜಿಲ್ಲೆಯಲ್ಲಿ 106ರ ಪೈಕಿ 88 ಗಣಿಗಷ್ಟೇ ಪೂರ್ಣ ಮಾನ್ಯತೆ | ಬೇಕಾಬಿಟ್ಟಿ ಬ್ಲಾಸ್ಟ್

**ಮಂಡ್ಯ:** ಶಿವಮೊಗ್ಗ ಘಟನೆ ಬೆನ್ನಲ್ಲೇ ಎಚ್ಚೆತ್ತ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಯು ಅಕ್ರಮ ಗಣಿಗಾರಿಕೆ, ಸ್ಫೋಟಕಗಳ ಬಳಕೆ ಮೇಲೆ ಕಣ್ಣಿಟ್ಟಿದೆ. ಪೊಲೀಸ್, ಕಂದಾಯ, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಕಾರ್ಯಾಚರಣೆ ಆರಂಭಿಸಿ, ಗಣಿ ಪ್ರದೇಶಗಳಿಗೆ ಭೇಟಿ ನೀಡಿ ತಪಾಸಣೆ ನಡೆಸುತ್ತಿದ್ದಾರೆ. ಅದರಂತೆ ಕಳೆದೆರಡು ದಿನಗಳಲ್ಲಿ ಶ್ರೀರಂಗಪಟ್ಟಣ, ಪಾಂಡವಪುರ ಮತ್ತು ನಾಗಮಂಗಲ ತಾಲೂಕಿನಲ್ಲಿ ಅನುಮತಿ ಇಲ್ಲದೆ ನಡೆಯುತ್ತಿದ್ದ 12 ಕ್ರಷರ್‌ಗಳು, ಗಣಿಗಾರಿಕೆ ಪ್ರದೇಶಗಳ ಮೇಲೆ ದಾಳಿ ನಡೆಸಿ ಸೀಜ್ ಮಾಡಿದ್ದಾರೆ.

**ಅಕ್ರಮಗಳಿಗಿಲ್ಲ ಕಡಿವಾಣ:** ಶಿವಮೊಗ್ಗ ಜಿಲ್ಲೆಯ ಗಣಿ ಪ್ರದೇಶದಲ್ಲಿ ಸಂಭವಿಸಿದ ಸ್ಫೋಟ ಘಟನೆಯು ಜಿಲ್ಲೆಗೂ ಎಚ್ಚರಿಕೆಯ ಗಂಟೆಯಾಗಿದೆ. ದಶಕಗಳಿಂದಲೂ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ಎಗ್ಗಿಲ್ಲದೆ ನಡೆಯುತ್ತಿದೆ. ಅಂತಹ ಸ್ಥಳಗಳಲ್ಲಿ ಸ್ಫೋಟಕಗಳನ್ನು ಬೇಕಾಬಿಟ್ಟಿ ಬಳಸಲಾಗುತ್ತಿದೆ. ಮಂಡ್ಯದಲ್ಲಿ 106 ಗಣಿಗಳಿಗೆ ಲೈಸೆನ್ಸ್ ನೀಡಿದ್ದರೂ 88 ಮಾತ್ರ ಸಂಪೂರ್ಣ ಮಾನ್ಯತೆಯೊಂದಿಗೆ ಕಾರ್ಯನಿರ್ವಹಿಸುತ್ತಿವೆ. ಹಾಗೆಯೇ 59 ಕ್ರಷರ್‌ಗಳಿಗೆ ಲೈಸೆನ್ಸ್ ನೀಡಲಾಗಿದೆ. ಜಿಲ್ಲೆಯ ಎಲ್ಲ ತಾಲೂಕುಗಳಲ್ಲೂ ಗಣಿ ಪ್ರದೇಶಗಳಿದ್ದರೂ ಶ್ರೀರಂಗಪಟ್ಟಣ, ನಾಗಮಂಗಲ ಮತ್ತು ಪಾಂಡವಪುರ ತಾಲೂಕಿನಲ್ಲಿ ಮಾತ್ರ ಅಕ್ರಮ ಗಣಿಗಾರಿಕೆ ಬಗ್ಗೆ ವ್ಯಾಪಕ ದೂರುಗಳು ಕೇಳಿ ಬರುತ್ತಿವೆ. ಇದಕ್ಕೆ ಸಾಕ್ಷಿಯಾಗಿ ಕಳೆದ ಮೂರ್ನಾಲ್ಕು ವರ್ಷಗಳಲ್ಲಿ ಗಣಿ ಪ್ರದೇಶಗಳಲ್ಲಿ ನಡೆದ



ಮಂಡ್ಯ ಜಿಲ್ಲೆಯಲ್ಲಿ ಅಕ್ರಮವಾಗಿ ನಡೆಯುತ್ತಿರುವ ಕ್ರಷರ್‌ಗೆ ಬೀಗಮುದ್ರೆ ಹಾಕಿರುವುದು.

- ಶ್ರೀರಂಗಪಟ್ಟಣ ತಾಲೂಕು ಚೆನ್ನನಕೆರೆ ವ್ಯಾಪ್ತಿಯ ಜೆ.ಜೆ.ಕ್ರಷರ್‌ನಲ್ಲಿ ಪರವಾನಗಿ ಇಲ್ಲದೆ ಬಂಡೆ ಸಿಡಿಸಲು ಬಳಸುತ್ತಿದ್ದ 2 ಮೆಗ್ಗರ್, 315 ಡಿಟೋನೇಟರ್ ವಶ

- ನಾಗಮಂಗಲದ ಶ್ರೀಲಕ್ಷ್ಮೀ ವೆಂಕಟೇಶ್ವರ ಕ್ರಷರ್ ಮತ್ತು ಕಲ್ಲುಕ್ವಾರಿಯ ಮೇಲೆ ದಾಳಿ, 63 ಜಿಲೆಟಿನ್ ವಶ

ಶ್ರೀರಂಗಪಟ್ಟಣ, ಪಾಂಡವಪುರ ತಾಲೂಕಿನಲ್ಲಿ ಹೆಚ್ಚು ಅಕ್ರಮ ಗಣಿಗಾರಿಕೆ ನಡೆಯುತ್ತಿದೆ ಎಂದು ದೂರುಗಳು ಪದೇ ಪದೇ ಕೇಳಿಬರುತ್ತಿವೆ. ಹೀಗಾಗಿ ಜಂಟಿ ಕಾರ್ಯಾಚರಣೆ ನಡೆಸಲಾಗುತ್ತಿದೆ.

**-ಟಿ.ವಿ.ಪುಷ್ಪಾ** ಹಿರಿಯ ಭೂವಿಜ್ಞಾನಿ, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಮಂಡ್ಯ

ಸ್ಫೋಟದಿಂದಾಗಿ 2-3 ಸಾವುಗಳು ಸಂಭವಿಸಿವೆ. ಹೀಗಿದ್ದರೂ ಜಿಲೆಟಿನ್ ಬಳಕೆ ನಿಯಮಾನುಸಾರ ನಡೆಯುತ್ತಿಲ್ಲ.